ಕರ್ನಾಟಕ ಸರ್ಕಾರ

.ಎಸ್[ಎನ್.ಡಿ.ಹೆಚ್]ಎಸ್.ಆರ್-78/06-07.

ಜಿಲ್ಲಾಧಿಕಾರಿಗಳವರ ಕಾರ್ಯಾಲಯ,
ಬೆಂಗಳೂರು ಜಿಲ್ಲೆ,
ಬೆಂಗಳೂರು ದಿನಾಂಕ: 6-3-2009.

37

-:ಅಧಿಕೃತ ಜ್ಞಾಪನ:-

ವಿಷಯ:- ಬೆಂಗಳೂರು ಜಿಲ್ಲೆ, ಬೆಂಗಳೂರು ಉತ್ತರ ತಾಲ್ಲೂಕು, ದಾಸನಪುರ ಹೋಬಳಿ, ಮತ್ತಹಳ್ಳಿ ಗ್ರಾಮದ ಸರ್ವೆ.ನಂ. 47/2 ರಲ್ಲಿ 0-31 ಎ/ಗುಂ ವಿಸ್ತೀರ್ಣದ ಜಮೀನನ್ನು ವ್ಯವಸಾಯೇತರ ವಾಸದ ಉದ್ದೇಶಕ್ಕಾಗಿ ಭೂ ಪರಿವರ್ತನೆ ಕೋರಿ ಶ್ರೀ. ಬೈಲಹನುಮಯ್ಯ ಬಿನ್ ತಮ್ಮಯ್ಯ ಮತ್ತಹಳ್ಳಿ ದಾಸನಪುರ ಹೋಬಳಿ, ಬೆಂಗಳೂರು ಉತ್ತರ ತಾಲ್ಲೂಕು ರವರು ಸಲ್ಲಿಸಿರುವ ಅರ್ಜಿ ದಿನಾಂಕ: 6-7-2006.

ಉಲ್ಲೇಖ:- 1] ಸರ್ಕಾರದ ಸುತ್ತೋಲೆ ಸಂಖ್ಯೆ: ಆರ್.ಡಿ:7:ಎಲ್‌ಜಿಪಿ:95 ದಿನಾಂಕ: 07-06-1999.

2] ಸರ್ಕಾರದ ಸುತ್ತೋಲೆ ಪತ್ರದ ಸಂಖ್ಯೆ: ಆರ್.ಡಿ:56:ಎಲ್‌ಜಿಪಿ:2008 ದಿನಾಂಕ: 10-9-2008 ಮತ್ತು 24-9-2008.

3] ತಹಶೀಲ್ದಾರ್,ಬೆಂಗಳೂರು ಉತ್ತರ ತಾಲ್ಲೂಕು ರವರ ವರದಿ ಸಂಖ್ಯೆ: ಎಎಲ್‌ಎನ್:ಎಸ್.ಆರ್[ಡಿ]44/06-07 ದಿನಾಂಕ: 11-7-2006.

4] ಭೂ ಪರಿವರ್ತನಾ ಶುಲ್ಕ ರೂ. 42199/- ಹಾಗೂ ಪೋಡಿ ಶುಲ್ಕ ರೂ. 55/- ಸೇರಿ ಒಟ್ಟು 42254/- ರೂ ಗಳನ್ನು ಚಲನ್. ಸಂಖ್ಯೆ: 35 ದಿನಾಂಕ: 29-7-2006 ರಂತೆ ಎಸ್.ಬಿ.ಎಂ.ಗೆ ಅರ್ಜಿದಾರರು ಜಮಾ ಮಾಡಿರುತ್ತಾರೆ.

5] ಏಕಗವಾಕ್ಷಿ ಸಮಿತಿ ಸಭೆಯ ನಡವಳಿ ದಿನಾಂಕ: 18-7-2006.

***

ಕರ್ನಾಟಕ ಭೂ ಕಂದಾಯ ಅಧಿನಿಯಮ 1964ರ ಕಲಂ 95(2), 95(4) ಮತ್ತು 95(7) ರ ಷರತ್ತುಗಳು ಹಾಗೂ ಈ ಕೆಳಕಂಡ ಷರತ್ತುಗಳಿಗೊಳಪಡಿಸಿ, ಕರ್ನಾಟಕ ಭೂ ಕಂದಾಯ(ತಿದ್ದುಪಡಿ) ನಿಯಮಗಳು 1994ರ ನಿಯಮ 107(1)ರಂತೆ ಎಕರೆ ಒಂದಕ್ಕೆ ರೂ. 54,450-00 (ರೂಪಾಯಿ ಐವತ್ತನಾಲ್ಕು ಸಾವಿರದ ನಾಲ್ಕು ನೂರ ಐವತ್ತು ಮಾತ್ರ) ಗಳಂತೆ ಅರ್ಜಿದಾರರು ಉಲ್ಲೇಖ [4] ರಲ್ಲಿ ನಮೂದಿಸಿರುವಂತೆ ಹಣವನ್ನು ಜಮಾ ಮಾಡಿದ ಮೇರೆಗೆ ಮೇಲ್ಕಂಡ ಅರ್ಜಿದಾರರಾದ ಶ್ರೀ. ಬೈಲಹನುಮಯ್ಯ ಬಿನ್ ತಮ್ಮಯ್ಯ ರವರ ಅರ್ಜಿಯನ್ನು ಪರಿಗಣಿಸಿ ದಾಸನಪುರ ಹೋಬಳಿ ಮತ್ತಹಳ್ಳಿ ಗ್ರಾಮದ ಸರ್ವೆ.ನಂ. 47/2 ರಲ್ಲಿ 0-31 ಎ/ಗುಂ ವಿಸ್ತೀರ್ಣದ ವ್ಯವಸಾಯದ ಜಮೀನನ್ನು ವ್ಯವಸಾಯೇತರ ವಾಸದ ಉದ್ದೇಶಕ್ಕಾಗಿ ಬಳಸಲು ಈ ಕೆಳಕಂಡ ಷರತ್ತುಗಳಿಗೆ ಒಳಪಟ್ಟು ಭೂ ಪರಿವರ್ತನಾ ಆದೇಶವನ್ನು ಹೊರಡಿಸಲಾಗಿದೆ.

1) ಈ ಭೂಮಿಯು ಯಾವ ಉದ್ದೇಶಕ್ಕಾಗಿ ಪರಿವರ್ತನೆಯಾಗಿದೆಯೋ ಆ ಉದ್ದೇಶಕ್ಕಾಗಿ ಉಪಯೋಗಿಸಿಕೊಳ್ಳಲು ಸಕ್ಷಮ ಪ್ರಾಧಿಕಾರಿಯಿಂದ ಅಂದರೆ **ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರ/ ಬಿ.ಎಂ.ಆರ್.ಡಿ.ಎ [ಸ್ಥಳೀಯ ಯೋಜನಾ ಪ್ರಾಧಿಕಾರ] ಬಿ.ಎಂ.ಐ.ಸಿ.ಎ.ಪಿಎ/ಮಾಲಿನ್ಯ ನಿಯಂತ್ರಣಾ ಮಂಡಳಿ** ರವರಿಂದ ಮಂಜೂರಾತಿಯನ್ನು ಪಡೆಯದ ಹೊರತು ಈ ಆದೇಶವು ಅನುಭವದಾರನಿಗೆ ಯಾವುದೇ ಹಕ್ಕನ್ನು ನೀಡುವುದಿಲ್ಲ.

2) ಈ ಪರಿವರ್ತಿತ ಜಮೀನನ್ನು ವಾಸದ ಉದ್ದೇಶಕ್ಕಾಗಿ ಮಾತ್ರ ಉಪಯೋಗಿಸಿಕೊಳ್ಳತಕ್ಕದ್ದು. ಈ ಜಮೀನನ್ನು ಪೂರ್ವಾನುಮತಿ ಇಲ್ಲದೆ ಬೇರೆ ಉದ್ದೇಶಕ್ಕಾಗಿ ಉಪಯೋಗಿಸಿಕೊಳ್ಳಬಾರದು.

3) ಈ ಜಮೀನಿನಲ್ಲಿ ಉದ್ದೇಶಿಸಿರುವ ಬಡಾವಣೆ ನಕ್ಷೆ ಹಾಗೂ ಪರವಾನಗಿ ಇತ್ಯಾದಿಗಳನ್ನು **ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರ/ ಬಿ.ಎಂ.ಆರ್.ಡಿ.ಎ[ಸ್ಥಳೀಯ ಯೋಜನಾ ಪ್ರಾಧಿಕಾರ] ಬಿ.ಎಂ.ಐ.ಸಿ.ಎ.ಪಿಎ/ಮಾಲಿನ್ಯ ನಿಯಂತ್ರಣಾ ಮಂಡಳಿ** ರವರಿಂದ ಅನುಮೋದಿಸಿಕೊಂಡು ಆ ನಂತರ ಅನುಮೋದನೆಗೊಂಡ ನಕ್ಷೆಗೆ ಅನುಗುಣವಾಗಿ ಕಟ್ಟಡವನ್ನು ಕಟ್ಟುವುದು. ಸದರಿ ಜಮೀನಿನಲ್ಲಿ ಲೇಔಟ್ ಪ್ಲಾನಿಗೆ ಅನುಮೋದನೆ ಪಡೆಯದೆ ಪರಭಾರೆ ಮಾಡಕೂಡದು.

4) ಇತರೆ ಅವಶ್ಯವಾದ ರಸ್ತೆ ಜಾಗ,ರಸ್ತೆ ಮಾರ್ಜಿನ್, ಖಾಲಿ ಜಾಗ ಇತ್ಯಾದಿಗಳನ್ನು **ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರ/ ಬಿ.ಎಂ.ಆರ್.ಡಿ.ಎ[ಸ್ಥಳೀಯ ಯೋಜನಾ ಪ್ರಾಧಿಕಾರ] ಬಿ.ಎಂ.ಐ.ಸಿ.ಎ.ಪಿಎ/ಮಾಲಿನ್ಯ ನಿಯಂತ್ರಣಾ ಮಂಡಳಿ** ರವರಿಂದ ಅನುಮೋದಿಸಿದ ಬಡಾವಣೆ ನಕ್ಷೆ ಪ್ರಕಾರ ಹಾಗೂ ನಿರ್ದಿಷ್ಟ ಪಡಿಸಿದ ನಿಯಮಗಳ ರೀತ್ಯ ಸದರಿ ಉದ್ದೇಶಕ್ಕಾಗಿ ಕಾಯ್ದಿರಿಸತಕ್ಕದ್ದು.

5) ಸಂಬಂಧಪಟ್ಟ ಪ್ರಾಧಿಕಾರದಿಂದ ಅನುಮೋದಿತ ನಕ್ಷೆ ಪಡೆಯದೆ ನಿವೇಶನಗಳನ್ನು/ಕಟ್ಟಡಗಳನ್ನು ನೊಂದಾವಣೆ ಮಾಡತಕ್ಕದ್ದಲ್ಲ, ಒಂದು ವೇಳೆ ಭೂ ಪರಿವರ್ತನೆ ಮಂಜೂರು ಮಾಡಿರುವ ಜಮೀನಿಗೆ ಪೂರಾ ವಿಸ್ತೀರ್ಣವನ್ನು ಮಾರಾಟ ಮಾಡಲು ಉದ್ದೇಶಿಸಿದಲ್ಲಿ ಈ ಆದೇಶ ಅಡ್ಡಿ ಬರುವುದಿಲ್ಲ.

6) ಸಾರ್ವಜನಿಕ ಹಿತದೃಷ್ಟಿಯಿಂದ ಸದರಿ ಜಮೀನಿನಲ್ಲಿ ನಿವೇಶನದಾರರಿಗೆ ನಾಗರೀಕ ಸೌಲಭ್ಯಗಳಾದ ವಿದ್ಯುಚ್ಛಕ್ತಿ, ನೀರು ಸರಬರಾಜು, ಒಳಚರಂಡಿ ವ್ಯವಸ್ಥೆ ಇತ್ಯಾದಿಗಳನ್ನು ಆರೋಗ್ಯ ನೈರ್ಮಲೀಕರಣ ಹಾಗೂ ಭದ್ರತೆಗಳ ಉದ್ದೇಶದಿಂದ ಎಲ್ಲಾ ಸೌಲಭ್ಯಗಳನ್ನು ಕಾನೂನು ರೀತ್ಯಾ ಒದಗಿಸಿಕೊಡುವುದು ಅರ್ಜಿದಾರರ ಜವಾಬ್ದಾರಿಯಾಗಿರುತ್ತದೆ.

7) ಈ ಜಮೀನಿಗೆ ತಾಕು ಫೂಟ್ ಖರಾಬ್ ಜಮೀನಿದ್ದಲ್ಲಿ ಕರ್ನಾಟಕ ಭೂ ಕಂದಾಯ 1964 ರ ಕಲಂ 67 ರಂತೆ ಸಾರ್ವಜನಿಕ-ಅರೆ ಸಾರ್ವಜನಿಕ ಉದ್ದೇಶಕ್ಕಾಗಿ ಕಾಯ್ದಿರಿಸತಕ್ಕದ್ದು.

--2

8) ಸರ್ಕಾರದ ಅದೇಶ ಸಂಖ್ಯೆ: ಪಿಡಬ್ಲ್ಯೂಡಿ: 7556–665 ಆರ್ ಮತ್ತು ಬಿ–6–54–5 ಮತ್ತು ಕೇಂ ಇಲಾಖೆಯ ಪತ್ರದ ನಂ ಪಿ 1:7(11) 67, ದಿನಾಂಕ: 1.1.1966 ರಂತೆ ಸರ್ಕಾರವು ಕಾಲಕಾಲಕ್ಕೆ ನೀಡುವ ಜಮೀನಿನಲ್ಲಿ ಕಟ್ಟಲು ಉದ್ದೇಶಿಸಿರುವ ಕಟ್ಟಡವು ರಾಷ್ಟ್ರೀಯ ಹಾಗೂ ರಾಜ್ಯಹೆದ್ದಾರಿಗಳಿಗೆ ಸಂಬಂಧಿಸಿದಂತೆ ರಸ್ತೆಯ 40 ಮೀಟರ್‌ಗಳ ಅಂತರವನ್ನು ಮತ್ತು ಜಿಲ್ಲಾ ಹೆದ್ದಾರಿಗೆ ಸಂಬಂಧಿಸಿದಂತೆ, ರಸ್ತೆಯ ಮಧ್ಯಭಾಗದಿಂದ ಅಂತರವನ್ನು ಕಾದಿರಿಸಬೇಕು ಹಾಗೂ ಈ ಖಾಲಿ ಪ್ರದೇಶದಲ್ಲಿ ಯಾವುದೇ ಕಟ್ಟಡವನ್ನು ಕಟ್ಟಬಾರದು.

9) **ಭೂ ಪರಿವರ್ತನೆ ಮಂಜೂರಿ ಯಾವ ಉದ್ದೇಶಕ್ಕೆ ಆಗಿರುತ್ತದೆಯೋ ಅದೇ ಉದ್ದೇಶಕ್ಕೆ ಈ ದಿ ವರ್ಷಗಳ ಒಳಗಾಗಿ ಉಪಯೋಗಿಸತಕ್ಕದ್ದು.**

10) ಈ ಭೂ ಪರಿವರ್ತನಾ ಜಮೀನಿನಲ್ಲಿ **ಸ್ಥಾಪಿಸಲಾಗುವ ಕೈಗಾರಿಕಾ ಘಟಕಗಳು ಹೊರದೂಡುವ ಹ ಇತರೆ ಕಲ್ಮಶಗಳನ್ನು ಪರಿಣಾಮಕಾರಿಯಾಗಿ ತಡೆಗಟ್ಟಿ ಸಾರ್ವಜನಿಕರ ಆರೋಗ್ಯಕ್ಕೆ ಯಾವುದೇ ರೀತಿಯ ಹಾನಿಯಾಗದ ಪರಿಸರ ಮಾಲಿನ್ಯವಾಗದಂತೆ ನೋಡಿಕೊಳ್ಳತಕ್ಕದ್ದು.** ಕೈಗಾರಿಕಾ ಉದ್ದೇಶಕ್ಕಾಗಿ ಭೂ ಪರಿವರ್ತಿತ ಜಮೀನಿನಲ್ಲಿ ಕೈಗಾರಿಕಾ ಘಟಕಗಳು ಕರ್ನಾಟಕ ಮಾಲಿನ್ಯ ನಿಯಂತ್ರಣ ಮಂಡಳಿ ಹಾಗೂ ಪರಿಸರ ಇಲಾಖೆಯ ಅನುಮತಿ ಹೊಂದಿರತಕ್ಕ

11) ಈ ಆದೇಶವು ಸದರಿ ಜಮೀನಿಗೆ ಸಂಬಂಧಪಟ್ಟಂತೆ ಯಾವುದೇ ನ್ಯಾಯಾಲಯದಲ್ಲಿನ ದಾವೆ/ರಿಟ್ ಮೇಲ್ಮನವಿಯ ತೀರ್ಪಿಗೆ ಒಳಪಟ್ಟಿರುತ್ತದೆ.

12) ಪ್ರಸ್ತಾವಿತ ಜಮೀನಿನ ಬಗ್ಗೆ ಯಾವುದೇ ಭೂಸ್ವಾಧೀನ ಪ್ರಕ್ರಿಯೆಗೆ ಒಳಪಟ್ಟಿದ್ದಲ್ಲಿ ಈ ಪ್ರಾಧಿಕಾ ಜವಾಬ್ದಾರಿಯಾಗುವುದಿಲ್ಲ.

13) ಮೇಲ್ಕಂಡ ಯಾವುದೇ ಷರತ್ತುಗಳನ್ನು ಉಲ್ಲಂಘಿಸಿದಲ್ಲಿ ಈ ಭೂ ಪರಿವರ್ತನೆ ಆದೇಶ ಯಾವುದೇ ಸೂಚನೆ ನೀಡದ ರದ್ದುಗೊಳಿಸಲಾಗುವುದು ಮತ್ತು ಕರ್ನಾಟಕ ಭೂ ಕಂದಾಯ ಕಾಯಿದೆ 1964ರ ಕಲಂ. 96ರಂತೆ ದಂಡ ಶುಲ್ಕವನ್ನು ವಿಧಿಸಲುಮುಂದಿನ ಕ್ರಮ ತೆಗೆದುಕೊಳ್ಳಲಾಗುವುದು. ಅಲ್ಲದೆ ಈ ಜಮೀನಿನಲ್ಲಿ ಅನಧಿಕೃತವಾಗಿ ಕಟ್ಟಿದ ಕಟ್ಟಡಗಳನ್ನು ಯಾವುದೇ ಪರಿಹಾರ ನೀಡದೆ ಕೆಡವಲು ಕ್ರಮ ತೆಗೆದುಕೊಳ್ಳಲಾಗುವುದು ಹಾಗೂ ಅದಕ್ಕೆ ತಗಲುವ ವೆಚ್ಚವನ್ನು ಭೂ ಕಂದಾಯ ಬಾಕಿ ಎಂದು ಖಾತೇದಾರರಿಂದ ವಸೂಲಿ ಮಾಡಲಾಗುವುದು.

14) ಪರಿಷ್ಕೃತ ಮಾಸ್ಟರ್ ಪ್ಲಾನ್–2015 ರಲ್ಲಿ ಸೂಕ್ಷ್ಮ ವಲಯ [Sensitive Zone] ನಲ್ಲಿ ಬರುವ ಪ್ರದೇಶಗಳಿಗೆ ಜಿಲ್ಲಾಧಿಕಾರಿಗಳು, ಬೆಂಗಳೂರು ಜಿಲ್ಲೆ ಇವರಿಗೆ ಭೂ ಪರಿವರ್ತನೆ ಬಗ್ಗೆ ಮಾಹಿತಿ ನೀಡುವಾಗ ಪ್ರಾಧಿಕಾರದ ಪೂರ್ವಾನುಮತಿ ಇಲ್ಲದೇ ಉದ್ದೇಶಿ ಜಾಗದಲ್ಲಿ ಯಾವುದೇ ರೀತಿಯ ಅಭಿವೃದ್ಧಿಯನ್ನು ಕೈಗೊಳ್ಳಬಾರದು.

15) ಉದ್ದೇಶಿತ ಜಾಗದಲ್ಲಿ ಯಾವುದೇ ರೀತಿಯ ಅಭಿವೃದ್ಧಿ ಚಟುವಟಿಕೆಗಳನ್ನು ಕೈಗೊಳ್ಳಬೇಕಾದಲ್ಲಿ ಪ್ರಾಧಿಕಾರದಿಂದ ರಚಿತವಾದ ಉಪ ಸಮಿತಿಯ ನಿರ್ಣಯದಂತೆ ಪ್ರಸ್ತಾವಿತ ಜಮೀನಿನ ವಿನ್ಯಾಸ/ಕಟ್ಟಡ ನಕ್ಷೆಗೆ ಬಿಎಂಐಸಿಎಪಿಎ ರವರಿಂದ ಪೂರ್ವಾನುಮೋದನೆ ಪಡೆದುಕೊಳ್ಳತಕ್ಕದ್ದು.

:: <u>ಷೆಡ್ಯೂಲ್ ವಿವರ</u> ::

ಬೆಂಗಳೂರು ಜಿಲ್ಲೆ, ಬೆಂಗಳೂರು ಉತ್ತರ ತಾಲ್ಲೂಕು, ದಾಸನಪುರ ಹೋಬಳಿ, ಮತ್ತಹಳ್ಳಿ ಗ್ರಾಮದ ಸರ್ವೆ.ನಂ. 47/2 ರಲ್ಲಿ 0–31 ಎ/ಗುಂ ವಿಸ್ತೀರ್ಣಕ್ಕೆ ಭೂ ಪರಿವರ್ತಿತ ಜಮೀನಿಗೆ ಚಕ್ಕುಬಂದಿ:–

| | |
|---|---|
| ಪೂರ್ವಕ್ಕೆ | ಸ.ನಂ. 47/6 ರ ಜಮೀನು |
| ಪಶ್ಚಿಮಕ್ಕೆ | ಸ.ನಂ. 47/8 ರ ಜಮೀನು |
| ಉತ್ತರಕ್ಕೆ | ಸ.ನಂ. 47/8 ರ ಜಮೀನು |
| ದಕ್ಷಿಣಕ್ಕೆ | ಸ.ನಂ. 47/3 ರ ಜಮೀನು |

[ಹೆಚ್. ರಾಮಾಂಜನೇಯ]
ವಿಶೇಷ ಜಿಲ್ಲಾಧಿಕಾರಿ(ಕಂ)
ಬೆಂಗಳೂರು ಜಿಲ್ಲೆ.

<u>ಪ್ರತಿಯನ್ನು ಮುಂದಿನ ಸೂಕ್ತ ಕ್ರಮಕ್ಕಾಗಿ ಕೆಳಕಂಡವರಿಗೆ ಕಳುಹಿಸಿದೆ:–</u>

ತಹಶೀಲ್ದಾರ್, ಬೆಂಗಳೂರು ಉತ್ತರ ತಾಲ್ಲೂಕು, ಬೆಂಗಳೂರು ರವರಿಗೆ ಮೂಲ ಕಡತ ಹಾಗೂ ಚಲನ್ ನೊಂದಿಗೆ ಕಳುಹಿಸುತ್ತಾ ಈ ಆದೇಶದ ಪ್ರಕಾರ ಸಂಬಂಧಪಟ್ಟ ಸರ್ವೆ ನಂಬರ್ ಭೂ ಪರಿವರ್ತನೆಯಾಗಿದೆ ಎಂದು ಗಣಕೀಕೃತ ಆರ್.ಟಿ.ಸಿ.ಯಲ್ಲಿ ಕೂಡಲೇ ನಮೂದಿಸತಕ್ಕದ್ದು ಮತ್ತು ಈ ಜಮೀನಿಗೆ ಖಾತೆದಾರರ ಲೆಕ್ಕದಲ್ಲಿ ಸದರಿ ಜಮೀನಿನ ಭೂ ಕಂದಾಯವನ್ನು ಕಡಿಮೆಗೊಳಿಸುವುದು.

2) ಆಯುಕ್ತರು, ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರ/ಬಿ.ಎಂ.ಆರ್.ಡಿ.ಎ [ಸ್ಥಳೀಯ ಯೋಜನಾ ಪ್ರಾಧಿಕಾರ] ಬಿ.ಎಂ.ಐ.ಸಿ.ಎ.ಪಿ.ಎ. ಬೆಂಗಳೂರು ರವರಿಗೆ ಮುಂದಿನ ಸೂಕ್ತ ಕ್ರಮಕ್ಕಾಗಿ ಕಳುಹಿಸಿದೆ.
3) ಉಪವಿಭಾಗಾಧಿಕಾರಿಗಳು, ಬೆಂಗಳೂರು ಉತ್ತರ ಉಪ ವಿಭಾಗ, ಬೆಂಗಳೂರು.
4) ಉಪ ನಿರ್ದೇಶಕರು, ಭೂ ಮಾಪನ ಮತ್ತು ಭೂ ದಾಖಲೆಗಳ ಇಲಾಖೆ, ಬೆಂಗಳೂರು ಉಪ ವಿಭಾಗ, ಬೆಂಗಳೂರು ಇವರಿಗೆ ಆರ್.ಟಿ.ಸಿ. ಹಾಗೂ ನಕ್ಷೆಯ ಪ್ರತಿಯೊಂದಿಗೆ ಕಳುಹಿಸುತ್ತಾ, ಭೂ ಪರಿವರ್ತನಾ ಪೋಡಿ ಕಾರ್ಯವನ್ನು ಜರೂರಾಗಿ ಪೂರೈಸಲು ಸೂಚಿಸಿದೆ.
5) ಉಪ ನೋಂದಣಾಧಿಕಾರಿಗಳು, ಬೆಂಗಳೂರು ಉತ್ತರ ತಾಲ್ಲೂಕು, ಬೆಂಗಳೂರು ಇವರಿಗೆ ಮಾಹಿತಿಗಾಗಿ.
6) ಅರ್ಜಿದಾರರಾದ ಶ್ರೀ. ಬೈಲಹನುಮಯ್ಯ ಬಿನ್ ತಮ್ಮಯ್ಯ, ಹೊನ್ನಸಂದ್ರ, ದಾಸನಪುರ ಹೋಬಳಿ, ಬೆಂಗಳೂರು ಉತ್ತರ ತಾಲ್ಲೂಕು ರವರಿಗೆ ದೃಢೀಕೃತ ಅಂಚೆ ಮೂಲಕ.
7) ಹೆಚ್ಚಿನ ಪ್ರತಿ.

ವಿಶೇಷ ಜಿಲ್ಲಾಧಿಕಾರಿ (ಕಂ).
ಬೆಂಗಳೂರು ಜಿಲ್ಲೆ.ಬೆಂಗಳೂರು.

On 16-12-2020
Compared by
Ready On 30-12-2020
Delivered On 11-01-2021
No. 1630 20-21

ಛಾಯಪ್ರತಿ
ಜಿಲ್ಲಾಧಿಕಾರಿಗಳ ಪರವಾಗಿ
ಜಿಲ್ಲೆ
30/12/2020